# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಹಂಚಿಕೆಯಾಗಿರುವ 8.0 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 12 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸಿ ಎರಡು ವರ್ಷಗಳ ಕಾಲಾವಕಾಶ ವಿಸ್ತರಿಸುವ ಬಗ್ಗೆ.

ಓದಲಾಗಿದೆ:
1) ಸರ್ಕಾರಿ ಆದೇಶ ಸಂಖ್ಯೆ: ಡಿಇ 199 ಎನ್‌ಸಿಇ 2001 ದಿನಾಂಕ: 12.2.2002
2) ಸರ್ಕಾರಿ ಆದೇಶ ಸಂಖ್ಯೆ: ಇಎನ್ 305 ಎನ್‌ಸಿಇ 2005 ದಿನಾಂಕ: 14.10.2005
3) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: KRED/08/Mavinahunda-8 MW to 12 ME/2015/1423 ದಿನಾಂಕ:14.05.2015.

* * *

<u>ಪ್ರಸ್ತಾವನೆ:-</u>

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಬೆಳಗಾವಿ ಜಿಲ್ಲೆಯ ರಾಯಬಾಗ್ ತಾಲ್ಲೂಕಿನ ಮಾವಿನಹೊಂಡ ಗ್ರಾಮದಲ್ಲಿ 2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿತ್ತು. ತದನಂತರ, ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ ಸದರಿ ಮಾವಿನಹೊಂಡ ಪ್ರದೇಶದಲ್ಲಿ 6 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದಲ್ಲಿ, ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಬೆಳಗಾವಿ ಜಿಲ್ಲೆಯ ರಾಯಬಾಗ್ ತಾಲ್ಲೂಕಿನ ಮಾವಿನಹೊಂಡ ಗ್ರಾಮದಲ್ಲಿ ಹಂಚಿಕೆಯಾಗಿರುವ 8.0 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ ಈಗಾಗಲೇ 2 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು ಅನುಷ್ಠಾನಗೊಳಿಸಿದ್ದು, ಇನ್ನೂ 8.4 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು ಅನುಷ್ಠಾನಗೊಳಿಸುವ ಕಾರ್ಯವು ಪ್ರಗತಿಯಲ್ಲಿರುವುದಾಗಿ ತಿಳಿಸಿ ಹಂಚಿಕೆಯಾಗಿದ್ದ ಒಟ್ಟು 8.0 ಮೆ.ವ್ಯಾ. ಸಾಮರ್ಥ್ಯವನ್ನು 12 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸಿ ಯೋಜನೆಯ ಅನುಷ್ಠಾನಕ್ಕೆ ಎರಡು ವರ್ಷಗಳ ಕಾಲಾವಕಾಶ ವಿಸ್ತರಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 130 ಎನ್‌ಸಿಇ 2015,**
**ಬೆಂಗಳೂರು, ದಿನಾಂಕ: 26.05.2015.**

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಬೆಳಗಾವಿ ಜಿಲ್ಲೆಯ ರಾಯಬಾಗ್ ತಾಲ್ಲೂಕಿನ ಮಾವಿನಹೊಂಡ ಗ್ರಾಮದಲ್ಲಿ ಹಂಚಿಕೆಯಾಗಿರುವ 8.0 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 12 ಮೆ.ವ್ಯಾ.ಗೆ ಹೆಚ್ಚಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲು ಈ ಆದೇಶ ಹೊರಡಿಸಿದ ದಿನಾಂಕದಿಂದ ಎರಡು ವರ್ಷದ ಕಾಲಾವಧಿ ವಿಸ್ತರಿಸಿ, ಈ ಅವಧಿಯಲ್ಲಿ ಯೋಜನೆಯನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

---2)

ಮೇಲೆ ಕಂಡಿಕೆ (1)ರ ಜಂಟಿ ಆದೇಶದ ಇತರ ಷರತ್ತು ಹಾಗೂ ನಿಬಂಧನೆಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
☎ 22034674.

26/5/15

ಇವರಿಗೆ:

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು-9.
4 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಬೆಂಗಳೂರು-560 001.
5 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
7 ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
8 ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಳಗಾವಿ ಜಿಲ್ಲೆ, ಬೆಳಗಾವಿ.
9 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಹುಬ್ಬಳ್ಳಿ.
10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ. ಗಮೇಶ್ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 20.40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 60 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ:

1 ಸರ್ಕಾರದ ಪತ್ರ ಸಂಖ್ಯೆ: ಇಎನ್ 57 ಎನ್‌ಸಿಇ 2014 ದಿನಾಂಕ: 27.08.2014.

2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ:KRED/08/GWTPL-20.4 MW to 60 MW/Ron/Gadag/2015/1198 ದಿನಾಂಕ: 15.04.2015.

* * *

<u>ಪ್ರಸ್ತಾವನೆ :-</u>

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರಿ ಪತ್ರದಲ್ಲಿ, ಮೆ: ಗಮೇಶ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ರೋಣ, ಮಲ್ಲಾಪುರ, ಸಾಂಡಿಗಿವಾಡ್, ಚಿಕ್ಕಮನ್ನೂರ್, ಬಾಸ್ಲಾಪುರ, ಸಾವಡಿ, ಹೊನ್ನಾಪುರ, ಕದಡಿ ಮತ್ತು ಹಡಗಲಿ ಗ್ರಾಮಗಳಲ್ಲಿ 20.40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು 2 ವರ್ಷಗಳ ಅವಧಿಯಲ್ಲಿ ಡಿಪಿಆರ್ ಸಲ್ಲಿಸುವ ಷರತ್ತಿಗೊಳಪಟ್ಟು ಸರ್ಕಾರದಿಂದ ತತ್ವಶಃ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಮೆ: ಗಮೇಶ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್, ಕಂಪನಿಯು ತಮಗೆ ತತ್ವಶಃ ಹಂಚಿಕೆಯಾಗಿರುವ 20.40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 60 ಮೆ.ವ್ಯಾ. ಸಾಮರ್ಥ್ಯಕ್ಕೆ ವೃದ್ಧಿಸಲು ಕೊರಿ ಡಿಪಿಆರ್ ಅನ್ನು ಸಲ್ಲಿಸಿದ್ದು, ಯೋಜನೆಯ ಪ್ರದೇಶವು ಖಾಸಗಿ ಭೂಮಿಯಾಗಿದ್ದು, ಹೆಚ್ಚಳಗೊಳ್ಳಲಿರುವ ಸಾಮರ್ಥ್ಯವನ್ನು ಸಹ ಸದರಿ ಸ್ಥಳದಲ್ಲಿಯೇ ಅನುಷ್ಠಾನಗೊಳಿಸುವುದಾಗಿ ತಿಳಿಸಿರುವುದನ್ನು ಪರಿಗಣಿಸಿ, ಈ ಕಂಪನಿಗೆ ಹಂಚಿಕೆಯಾಗಿರುವ 20.40 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು 60 ಮೆ.ವ್ಯಾ.ಗೆ ಹೆಚ್ಚಿಸಿ ಆದೇಶ ಹೊರಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಪನಿಯು ಕ್ರೆಡಲ್‌ಗೆ ಸಲ್ಲಿಸಿರುವ ಮನವಿಯಲ್ಲಿ, ಪ್ರಸ್ತುತ ತತ್ವಶಃ ಹಂಚಿಕೆಯಾಗಿರುವ 20.40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳದಲ್ಲಿ 200 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್ ಉತ್ಪಾದನೆಗೆ ಅವಕಾಶವಿದ್ದು, ಆದರೆ 200 ಮೆ.ವ್ಯಾ. ಸಾಮರ್ಥ್ಯಕ್ಕೆ Evacuation ಸೌಲಭ್ಯ ಲಭ್ಯವಿಲ್ಲದಿರುವುದರಿಂದ ಸದ್ಯಕ್ಕೆ 60 ಮೆ.ವ್ಯಾ. ಸಾಮರ್ಥ್ಯದ ಯೋಜನೆಯನ್ನು ಮಾತ್ರ ಅನುಷ್ಠಾನಗೊಳಿಸುವುದಾಗಿ ಅಭಿವೃದ್ಧಿದಾರರು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಇದನ್ನು ಪರಿಗಣಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

<u>ಸರ್ಕಾರಿ ಆದೇಶ ಸಂಖ್ಯೆ : ಇಎನ್ 83 ಎನ್‌ಸಿಇ 2015,</u>
<u>ಬೆಂಗಳೂರು, ದಿನಾಂಕ : 29.06.2015.</u>

ಮೆ: ಗಮೇಶ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್, ಕಂಪನಿಗೆ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ರೋಣ, ಮಲ್ಲಾಪುರ, ಸಾಂಡಿಗಿವಾಡ್, ಚಿಕ್ಕಮನ್ನೂರ್, ಬಾಸ್ಲಾಪುರ, ಸಾವಡಿ, ಹೊನ್ನಾಪುರ, ಕದಡಿ ಮತ್ತು ಹಡಗಲಿ ಗ್ರಾಮಗಳಲ್ಲಿ ತತ್ವಶಃ ಹಂಚಿಕೆಯಾಗಿರುವ 20.40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 60 ಮೆಗಾ ವ್ಯಾಟ್‌ಗೆ ಹೆಚ್ಚಿಸಿ, ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ನಿಬಂಧನೆಗೊಳಪಟ್ಟು **ಹಂಚಿಕೆ** ಮಾಡಿದೆ:-

---2)